ಹುದ್ದೆಗಲ ಮಂಜೂರಾತಿ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸ ಲಾಗುವುದು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ : 2013–14ನೇ ಸಾಲಿನಲ್ಲಿ ಲಿಂಗ ಸುಗೂರು ತಾಲ್ಲೂಕಿನಲ್ಲಿರುವ ಪರಿಶಿಷ್ಟ ವರ್ಗದ ವಿದ್ಯಾರ್ಥಿ ನಿಲಯ ಗಳಲ್ಲಿ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯಾಬಲದ ಕೊರತೆಯಿದ್ದ ಪ್ರಯುಕ್ತ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ ಮಸ್ಕಿ ಇದರ ಸಂಖ್ಯಾಬಲವನ್ನು 50 ರಿಂದ 75ಕ್ಕೆ ಹಾಗೂ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಲಿಂಗಸುಗೂರು ಟೌನ್, ಇದರ ಸಂಖ್ಯಾಬಲವನ್ನು 50 ರಿಂದ 100 ಕ್ಕೆ ಹೆಚ್ಚಿಸಿ ದಿನಾಂಕ: 30.08. 2013ರಲ್ಲಿ ಆದೇಶಿಸಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯಾಬಲವನ್ನು ಹೆಚ್ಚಿಸಿದಲ್ಲಿ ವಿದ್ಯಾರ್ಥಿಗಳಿಗೆ ಸ್ಥಳಾವ ಕಾಶ ಮತ್ತು ಮೂಲಭೂತ ಸೌಕರ್ಯಗಳನ್ನು ಒದಗಿಸಲು ತೊಂದರೆ ಯಾಗುತ್ತದೆ. ಹೀಗಾಗಿ ಇರುವ ವಿದ್ಯಾರ್ಥಿನಿಲಯಗಳಲ್ಲಿ– ಸಂಖ್ಯಾಬಲ ಹೆಚ್ಚಿಸಲಾಗುವುದಿಲ್ಲ. ಬದಲಾಗಿ ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯ ಗಳಲ್ಲಿ ಪ್ರವೇಶ ದೊರೆಯದ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಯೋಜನೆ ಯಡಿ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ ` 1500/– ರಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ `15000/–ಗಳನ್ನು ನೀಡಲಾಗುವುದು. ಅರ್ಹ ವಿದ್ಯಾರ್ಥಿಗಳು ಇದರ ಪ್ರಯೋಜನವನ್ನು ಪಡೆಯಬಹುದಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು:

801 (405); ಶ್ರೀ ಮೋಹಿಯುದ್ದೀನ್ ಬಾವಾ ಬಿ. ಎ. (ಮಂಗಳೂರು ನಗರ ಉತ್ತರ)

(ಅ) ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಸಮೀಪವಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಹಾಗೂ ತುರ್ತು ಚಿಕಿತ್ಸಾ ಘಟಕಗಳನ್ನು ಆರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

(ಆ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿನಲ್ಲಿ ಯಾವ ಕ್ರಮವನ್ನು ಸರ್ಕಾರ ಕೈಗೊಳ್ಳಲಿದೆ? (ವಿವರ ನೀಡುವುದು)

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ರಾಷ್ಟ್ರೀಯ ಹೆದ್ದಾರಿ 17ರಲ್ಲಿ ಬರುವ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಪ್ರತ್ಯೇಕವಾಗಿ ಟ್ರಾಮಾಕೇರ್ ಸೆಂಟರ್‌ಗಳನ್ನು ಸ್ಥಾಪನೆ ಮಾಡಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಹಾಗೂ ಸದರಿ ಆಸ್ಪತ್ರೆಗಳಲ್ಲಿ ಈಗಾಗಲೇ ತುರ್ತು ಚಿಕಿತ್ಸಾ ಘಟಕಗಳು ಕಾರ್ಯನಿರ್ವಹಿಸುತ್ತಿದೆ.

(ಆ) ಕೇಂದ್ರ ಸರ್ಕಾರದಿಂದ ಮಂಜೂರಾತಿ ಬಂದ ನಂತರ ಕ್ರಮಕೈಗೊಳ್ಳ ಲಾಗುವುದು.

ಆಪ್ತ ಸಮಾಲೋಚರನ್ನು ನಿಯೋಜಿಸುವುದು:

802 (406); ಶ್ರೀ ಮೋಹಿಯುದ್ದೀನ್ ಬಾವಾ ಬಿ. ಎ. (ಮಂಗಳೂರು ನಗರ ಉತ್ತರ)

(ಅ) ಪ್ರಸಕ್ತ ಸಾಲಿನ ವಿವಿಧ ವಿದ್ಯಾರ್ಥಿ ವಿದ್ಯಾರ್ಥಿನಿ ನಿಲಯಗಳಲ್ಲಿ ಸೇರ್ಪಡೆಗೊಂಡಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು;